ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 2038
ಸದಸ್ಯರ ಹೆಸರು	: ಶ್ರೀ ಹೆಚ್.ಎಂ. ರಮೇಶಗೌಡ
ಉತ್ತರಿಸುವ ದಿನಾಂಕ	: 24.03.2021
ಉತ್ತರಿಸುವ ಸಚಿವರು	: ಕಂದಾಯ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು)	ಸರ್ಕಾರಿ ಜಮೀನುಗಳನ್ನು ಸರ್ಕಾರಿ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71 ರಡಿ ಕಾಯ್ದಿರಿಸಲು ಹಾಗೂ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮಗಳಡಿ ಮಂಜೂರಾತಿ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆ.
ಆ)	ಕರ್ನಾಟಕ ಭೂ ಕಂದಾಯ ಅಧಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ; (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು)	ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 70 ಎಲ್‌ಜಿಪಿ 2008; ದಿನಾಂಕ: 08.08.2008 ರ ಸುತ್ತೋಲೆಯಲ್ಲಿ ಸಾರ್ವಜನಿಕ ಹಾಗೂ ಸರ್ಕಾರಿ ಉದ್ದೇಶಗಳಿಗಾಗಿ 4 ಹೆಕ್ಟೇರ್ (9-36 ಎ/ಗುಂ) ವರೆಗೆ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅವಕಾಶವನ್ನು ಕಲ್ಪಿಸಲಾಗಿದೆ. (ಪ್ರತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ).
ಇ)	ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು? (ವಿವರ ನೀಡುವುದು)	ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಸಂಬಂಧಪಟ್ಟ ಇಲಾಖೆಗಳಿಂದ ಮನವಿಗಳು ಸ್ವೀಕೃತವಾದಲ್ಲಿ, ಇಲಾಖೆಗೆ ಅಗತ್ಯವಿರುವ ವಿಸ್ತೀರ್ಣವನ್ನು ಖಚಿತಪಡಿಸಿಕೊಂಡು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 71 ರಡಿ ಕಾಯ್ದಿರಿಸಲು ಹಾಗೂ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮಗಳಡಿ ಮಂಜೂರಾತಿ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆ.

ಸಂಖ್ಯೆ: ಆರ್‌ಡಿ 89 ಎಲ್‌ಜಿಕ್ಯೂ 2021

(ಆರ್ .ಅಶೋಕ)
ಕಂದಾಯ ಸಚಿವರು.